<u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ: ಶ್ರೀ ಎಲ್. ಶ್ರೀಕಂಠಯ್ಯ, ಕಾರ್ಯಪಾಲಕ ಇಂಜಿನಿಯರ್ ಇವರ ಅಮಾನತ್ತನ್ನು ತೆರವುಗೊಳಿಸುವ ಬಗ್ಗೆ- ಆದೇಶ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 100 ಇಎನ್ಕ್ಯೂ 2021 ದಿನಾಂಕ: 28.10.2021
2. ಶ್ರೀ ಎಲ್. ಶ್ರೀಕಂಠಯ್ಯ, ಕಾರ್ಯಪಾಲಕ ಇಂಜಿನಿಯರ್ ಇವರು ಸರ್ಕಾರಕ್ಕೆ ಸಲ್ಲಿಸಿರುವ ಮನವಿ ದಿನಾಂಕ:

*****

ಪ್ರಸ್ತಾವನೆ:

ಪೊಲೀಸ್ ಅಧೀಕ್ಷಕರು (ಕೇಂದ್ರ ಸ್ಥಾನ) ಅಪರ ಪೊಲೀಸ್ ಮಹಾ ನಿರ್ದೇಶಕರ ಕಚೇರಿ, ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು ಇವರು ಶ್ರೀ ಎಲ್. ಶ್ರೀಕಂಠಯ್ಯ, ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಮಡಿಕೇರಿ, ಇವರು ಅಕ್ರಮ ಸಂಭಾವನೆ ಸ್ವೀಕಾರ ಪ್ರಕರಣದಲ್ಲಿ ಭಾಗಿಯಾಗಿರುವುದರಿಂದ ಸದರಿ ಅಧಿಕಾರಿಯನ್ನು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ.) ನಿಯಮಗಳ ಅನುಸಾರ ಸೇವೆಯಿಂದ ಅಮಾನತ್ತುಪಡಿಸಿ ಶಿಸ್ತು ಕ್ರಮ ಕೈಗೊಳ್ಳುವಂತೆ ಕೋರಿ ಸರ್ಕಾರಕ್ಕೆ ಕಳುಹಿಸಿದ್ದ ಪ್ರಸ್ತಾವನೆ, ಪೊಲೀಸ್ ಅಧೀಕ್ಷಕರು, ಭ್ರಷ್ಟಾಚಾರ ನಿಗ್ರಹ ದಳ, ದಕ್ಷಿಣ ವಲಯ, ಮೈಸೂರು ಇವರ ವರದಿ ಹಾಗೂ ಇತರೆ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿ ಸದರಿ ಪ್ರಕರಣದಲ್ಲಿ ಭ್ರಷ್ಟಾಚಾರ ನಿಗ್ರಹ ದಳವು ಕೈಗೊಳ್ಳುವ ಕ್ರಮವನ್ನು ಬಾಕಿ ಇರಿಸಿ ಶ್ರೀ ಎಲ್. ಶ್ರೀಕಂಠಯ್ಯ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಮಡಿಕೇರಿ ಇವರನ್ನು ಮೇಲೆ ಓದಲಾದ ಕ್ರಮಾಂಕ(1)ರ ದಿನಾಂಕ:28.10.2021 ರ ಆದೇಶದಲ್ಲಿ ಸೇವೆಯಿಂದ ಅಮಾನತ್ತುಪಡಿಸಲಾಗಿತ್ತು.

ಶ್ರೀ ಎಲ್. ಶ್ರೀಕಂಠಯ್ಯ ಇವರು ಸರ್ಕಾರಕ್ಕೆ ಮನವಿ ಸಲ್ಲಿಸಿ ಸದರಿ ಪ್ರಕರಣದಲ್ಲಿ ತಮ್ಮಿಂದ ಯಾವುದೇ ತಪ್ಪಾಗಿರುವುದಿಲ್ಲವೆಂದು, ತಾವು ಈ ಹಿಂದೆ ಕಾರ್ಯನಿರ್ವಹಿಸಿದ ಸ್ಥಳಗಳಲ್ಲಿ ಹೆಚ್ಚಿನ ಶ್ರದ್ಧೆ, ಆಸಕ್ತಿಯಿಂದ ಕರ್ತವ್ಯ ನಿರ್ವಹಿಸಿರುತ್ತೇನೆಂದು ಹಾಗಾಗಿ ತಮ್ಮನ್ನು ಅಮಾನತ್ತು ಪಡಿಸಿರುವ ಆದೇಶವನ್ನು ರದ್ದುಪಡಿಸಿ ಸ್ಥಳನಿಯುಕ್ತಿಗೊಳಿಸುವಂತೆ ಕೋರಿರುತ್ತಾರೆ.

ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 2 ಸೇಇವಿ 2003, ದಿನಾಂಕ:06.02.2003 ರ ಅನುಸಾರ ಅಮಾನತ್ತು ಪ್ರಕರಣಗಳನ್ನು ನಿಯಮಿತವಾಗಿ ಮೂರು ತಿಂಗಳಿಗೊಮ್ಮೆ ಪರಿಶೀಲಿಸಿ ನಿರ್ಣಯ ಕೈಗೊಳ್ಳಲು ತಿಳಿಸಲಾಗಿದೆ. ಈ ಪ್ರಕರಣದಲ್ಲಿ ಇನ್ನು ತನಿಖಾ ವರದಿಯು ಸ್ವೀಕೃತವಾಗಿರುವುದಿಲ್ಲ. ಅಂತಿಮ ತನಿಖಾ ವರದಿ ತಯಾರಿಸಲು ಸಾಕಷ್ಟು ಸಮಯಾವಕಾಶ ಬೇಕಾಗಿರುತ್ತದೆ. ಆದ್ದರಿಂದ ಶ್ರೀ ಎಲ್. ಶ್ರೀಕಂಠಯ್ಯ, ಕಾ.ಇಂ., ಇವರನ್ನು ಈಗಾಗಲೇ ಸೇವೆಯಿಂದ ಅಮಾನತ್ತುಪಡಿಸಿ ಮೂರು ತಿಂಗಳಿಗೂ ಹೆಚ್ಚಿನ ಅವಧಿ ಗತಿಸಿರುವುದರಿಂದ ಅವರ ಅಮಾನತ್ತನ್ನು ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸಿ ಅವರನ್ನು ಸ್ಥಳನಿಯುಕ್ತಿಗೊಳಿಸಲು ಸರ್ಕಾರವು ನಿರ್ಧರಿಸಲಾಗಿದೆ. ಆದ್ದರಿಂದ ಈ ಕೆಳಕಂಡ ಆದೇಶ:

<u>ಸರ್ಕಾರದ ಆದೇಶ ಸಂಖ್ಯೆ. ಗ್ರಾಅಪ 100 ಇಎನ್ ಕ್ಯೂ 2021, ಬೆಂಗಳೂರು,</u> ದಿನಾಂಕ: 18.02.2022

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಎಲ್. ಶ್ರೀಕಂಠಯ್ಯ, ಕಾರ್ಯಪಾಲಕ ಅಭಿಯಂತರರು ಇವರ ವಿರುದ್ಧ ಕೊಡಗು ಭ್ರಷ್ಟಾಚಾರ ನಿಗ್ರಹದಳದಲ್ಲಿ

...2

ದಾಖಲಾದ ಮೊಕದ್ದಮೆ ಸಂಖ್ಯೆ:7/2021ಗೆ ಸಂಬಂಧಿಸಿದಂತೆ ಭ್ರಷ್ಟಾಚಾರ ನಿಗ್ರಹದಳವು ಕೈಗೊಳ್ಳುವ ಕ್ರಮವನ್ನು ಬಾಕಿ ಇರಿಸಿ ಸದರಿಯವರ ಅಮಾನತ್ತನ್ನು ತಕ್ಷಣದಿಂದ ಜಾರಿಗೆ ಬರುವಂತೆ ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸಿ ಸದರಿಯವರನ್ನು ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಮಡಿಕೇರಿ ಇಲ್ಲಿನ ಖಾಲಿ ಹುದ್ದೆಗೆ ಸ್ಥಳ ನಿಯುಕ್ತಿಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ.ನದೀಮ್ ಅಹ್ಮದ್),
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಪೊಲೀಸ್ ಅಧೀಕ್ಷಕರು (ಕೇಂದ್ರ ಸ್ಥಾನ) ಅಪರ ಪೊಲೀಸ್ ಮಹಾ ನಿರ್ದೇಶಕರು (ಪ್ರ), ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು .
3. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಡಿಕೇರಿ.
7. ಪೊಲೀಸ್ ಅಧೀಕ್ಷಕರು, ಭ್ರಷ್ಟಾಚಾರ ನಿಗ್ರಹ ದಳ, ಕೊಡಗು.
8. ಪೊಲೀಸ್ ಅಧೀಕ್ಷಕರು ಭ್ರಷ್ಟಾಚಾರ ನಿಗ್ರಹ ದಳ, ದಕ್ಷಿಣ ವಲಯ, ಮೈಸೂರು.
9. ಸಂಬಂಧಪಟ್ಟ ಅಧಿಕಾರಿಗೆ
10. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ ಯವರಿಗೆ.
11. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ & ಸಿ)
12. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ/ ಜಂಟಿ ಕಾರ್ಯದರ್ಶಿ (ಆಡಳಿತ-1) ಇವರುಗಳ ಆಪ್ತ ಕಾರ್ಯದರ್ಶಿ /ಆಪ್ತ ಸಹಾಯಕರಿಗೆ.
13. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ
14. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.